# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:29/07/2008 ರ ನಡವಳಿಗಳು**

ವಿಷಯದ ಸಂಖ್ಯೆ:312/2008-09

Approval for exclusivity period of 90 days to M/s. Geodesic Techniques Pvt. Ltd, Bangalore for Monorail Project on DBoot and under Swiss Challenge.

ಪ್ರಸ್ತಾವನೆ:

M/s. Geodesic Techniques Pvt. Ltd., has given Suo-Moto proposal on DBoot and under Swiss Challenge to the Chief Secretary, Government of Karnataka and Commissioner, BBMP for giving exclusivity period of 90 days for submission of technical proposals along with designs and draft concession agreement. In the proposals submitted by M/s. Geodesic Techniques Pvt. Ltd., they have given a brief not of proposed Monorail Project in which they are planning to have 8 loops within the BBMP area. The important junctions to be covered by this Monorail loops are detailed in Annexure 3A of the proposal given by the Geodesic Techniques Pvt. Ltd. They have also given a map of BBMP showing the location of these 8 Monorail loops. The proposal is a Suo-Moto proposal given under Swiss Challenge requesting for exclusivity period of 90 days for submission of detail project report along with designs and concession agreement. Subject is placed before the Administrator for his kind consideration and approval for giving exclusivity period of 90 days to M/s. Geodesic Techniques Pvt. Ltd., for submission of DPR along with designs and draft concession agreement for Monorail Project on DBoot basis under Swiss Challenge.

The Proposal of the Commissioner Note, Date:07/07/2008 to M/s. Geodesic Techniques Pvt. Ltd, Bangalore for Monorail Project on DBoot and under Swiss Challenge for the Approval.

ತೀರ್ಮಾನ: Commissioner's Note Date:07/07/2008 is Approved

(ದಿಲೀಪ್ ರಾವ್)
ಆಡಳಿತಗಾರರು

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 30/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:366/2008-09**

ಪಶುವೈದ್ಯಕೀಯ ಕಾಲೇಜ್ ಮುಂಭಾಗದ ಭೂವಿನ್ಯಾಸ ಹಾಗೂ ಮೀಡಿಯನ್ ಅಭಿವೃದ್ಧಿ ಕೆಲಸಗಳನ್ನು ತುಂಡು ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳುವ ಬಗ್ಗೆ.

**ಪ್ರಸ್ತಾಪನೆ:**

ವಾರ್ಡ್ ಸಂಖ್ಯೆ:96 ರಲ್ಲಿ ಏರ್‌ಪೋರ್ಟ್ ರಸ್ತೆಯ ಪಕ್ಕದ ಪಶು ವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನಕ್ಕೆ ಹೂವಿನ ಗಿಡ ಮತ್ತು ಮರದ ಜಾತಿಯ ಗಿಡಗಳನ್ನು ನೆಡುವ ಕೆಲಸಗಳನ್ನು ಏರ್‌ಪೋರ್ಟ್ ರಸ್ತೆಯ ಕಾಮಗಾರಿಗೆ ಪೂರಕವಾಗಿರುವಂತೆ ತುರ್ತಾಗಿ ಕೈಗೊಳ್ಳಬೇಕಾಗಿದೆ.

ಈ ಹಿನ್ನೆಲೆಯಲ್ಲಿ ರೂ.4,92,000 ಗಳಿಗೆ ಅಂದಾಜು ಪಟ್ಟಿಗಳನ್ನು ತಯಾರಿಸಿದ್ದು, Landscape Development of Parks, Medians, Boulevard & Circles. 2008-09ನೇ ಸಾಲಿನ ಶೀರ್ಷಿಕೆಯಡಿ ನಿಗದಿಪಡಿಸಿರುವ ಅನುದಾನದಲ್ಲಿ ಭರಿಸಲು ಉದ್ದೇಶಿಸಿದೆ ಹಾಗೂ ಕಾಮಗಾರಿ ಸಂಕೇತವನ್ನು ಪಡೆಯಲಾಗಿದ್ದು, ಅದರಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲಾಗುವುದು. ಸದರಿ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಇಲಾಖಾ ಅನುಮೋದಿತ ದರಗಳನ್ನು ಅಳವಡಿಸಿಕೊಂಡು ಮೆ: ನೇಚರ್ ಕೇರ್ ಲ್ಯಾಂಡ್ ಸ್ಕೇಪರ್ಸ್, ಬೆಂಗಳೂರು ಇವರು ಇಲಾಖಾ ದರಗಳಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲು ಒಪ್ಪಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಪಶು ವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನ ಹಾಗೂ ಮೀಡಿಯನ್ ಅಭಿವೃದ್ಧಿ ಕೆಲಸಗಳನ್ನು ತುಂಡು ಗುತ್ತಿಗೆಯ ಆಧಾರದ ಮೇಲೆ ಮೆ:ನೇಚರ್ ಕೇರ್ ಲ್ಯಾಂಡ್ ಸ್ಕೇಪರ್ಸ್, ಬೆಂಗಳೂರು ರವರಿಂದ ನಿರ್ವಹಿಸಲು ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:367/08-09**

ಪಶುವೈದ್ಯಕೀಯ ಕಾಲೇಜ್ ಮುಂಭಾಗದ ಭೂ ವಿನ್ಯಾಸ ಅಭಿವೃದ್ಧಿ ಕೆಲಸಗಳನ್ನು ತುಂಡು ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳುವ ಬಗ್ಗೆ.

**ಪ್ರಸ್ತಾವನೆ:**

ವಾರ್ಡ್ ಸಂಖ್ಯೆ:96 ರ ಏರ್‌ಪೋರ್ಟ್ ರಸ್ತೆಯ ಪಕ್ಕದ ಪಶು ವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನಕ್ಕೆ ಹೂವಿನ ಗಿಡ ಹಾಗೂ ಮರದ ಜಾತಿಯ ಗಿಡಗಳನ್ನು ನೆಡುವ ಕೆಲಸಗಳನ್ನು ಏರ್‌ಪೋರ್ಟ್ ರಸ್ತೆಯ ಕಾಮಗಾರಿಗಳಿಗೆ ಪೂರಕವಾಗಿರುವಂತೆ ತುರ್ತಾಗಿ ಕೈಗೊಳ್ಳಬೇಕಾಗಿದೆ.

ಈ ಹಿನ್ನೆಲೆಯಲ್ಲಿ ರೂ.4,96,,000 ಗಳಿಗೆ ಅಂದಾಜು ಪಟ್ಟಿಗಳನ್ನು ತಯಾರಿಸಿದ್ದು 2008-09ನೇ ಸಾಲಿನ Landscape Development of parks, Medians, Boulevard & circles. ಲೆಕ್ಕ ಶೀರ್ಷಿಕೆಯಡಿ ನಿಗದಿಪಡಿಸಿರುವ ಅನುದಾನದಲ್ಲಿ ಭರಿಸಲು ಉದ್ದೇಶಿಸಿದೆ ಹಾಗೂ ಕಾಮಗಾರಿ ಸಂಕೇತವನ್ನು ಪಡೆಯಲಾಗಿದ್ದು, ಅದರಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲಾಗುವುದು. ಸದರಿ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಇಲಾಖಾ ಅನುಮೋದಿತ ದರಗಳನ್ನು ಅಳವಡಿಸಿಕೊಳ್ಳಲಾಗಿದ್ದು, ಮೆ॥ ಸನ್‌ರೇಸ್ ಲ್ಯಾಂಡ್ ಸ್ಕೇಪರ್ಸ್ ಬೆಂಗಳೂರು ರವರು ಇಲಾಖಾ ದರಗಳಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲು ಒಪ್ಪಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಪಶು ವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನ ಅಭಿವೃದ್ಧಿ ಕೆಲಸವನ್ನು ತುಂಡು ಗುತ್ತಿಗೆ ಆಧಾರದ ಮೇಲೆ ಮೆ॥ ಸನ್‌ರೇಸ್ ಲ್ಯಾಂಡ್ ಸ್ಕೇಪರ್ಸ್ ಬೆಂಗಳೂರು ರವರಿಂದ ನಿರ್ವಹಿಸಲು ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:31/05/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:31/05/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ನಡವಳಿಗಳು**

**ವಿಷಯದ ಸಂಖ್ಯೆ:368/08-09**

ಪಶುವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನಕ್ಕೆ ಕೊಳವೆ ಬಾವಿ ಹಾಗೂ ಸ್ಪ್ರಿಂಕಲ್ಸ್ ಕೆಲಸಗಳನ್ನು ತುಂಡು ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳುವ ಬಗ್ಗೆ.

**ಪ್ರಸ್ತಾವನೆ:**

ವಾರ್ಡ್ ಸಂಖ್ಯೆ:96 ರ ಏರ್‌ಪೋರ್ಟ್ ರಸ್ತೆಯ ಪಕ್ಕದ ಪಶು ವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನಕ್ಕೆ ಕೊಳವೆ ಬಾವಿ ಹಾಗೂ ಸ್ಪ್ರಿಂಕಲ್ಸ್ ಕೆಲಸಗಳನ್ನು ಏರ್‌ಪೋರ್ಟ್ ರಸ್ತೆಯ ಕಾಮಗಾರಿಗಳಿಗೆ ಪೂರಕವಾಗಿರುವಂತೆ ತುರ್ತಾಗಿ ಕೈಗೊಳ್ಳಬೇಕಾಗಿದೆ.

ಈ ಹಿನ್ನೆಲೆಯಲ್ಲಿ ರೂ.4,60,000 ಗಳಿಗೆ ಅಂದಾಜು ಪಟ್ಟಿಗಳನ್ನು ತಯಾರಿಸಿದ್ದು 2008-09ನೇ ಸಾಲಿನ Landscape Development of parks, Medians, Boulevard & Circles ಶೀರ್ಷಿಕೆಯಡಿ ನಿಗದಿಪಡಿಸಿರುವ ಅನುದಾನದಲ್ಲಿ ಭರಿಸಲು ಉದ್ದೇಶಿಸಿದೆ ಹಾಗೂ ಕಾಮಗಾರಿ ಸಂಕೇತವನ್ನು ಪಡೆಯಲಾಗಿದ್ದು, ಅದರಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲಾಗುವುದು. ಸದರಿ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಇಲಾಖಾ ಅನುಮೋದಿತ ದರಗಳನ್ನು ಅಳವಡಿಸಿಕೊಳ್ಳಲಾಗಿದ್ದು, ಮೆ॥ಮಾತಾ ಬೋರ್‌ವೆಲ್ ಡ್ರಿಲರ್ಸ್, ಬೆಂಗಳೂರು ರವರು ಇಲಾಖಾ ದರಗಳಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲು ಒಪ್ಪಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪಶು ವೈದ್ಯಕೀಯ ಕಾಲೇಜ್ ಮುಂಭಾಗದ ಉದ್ಯಾನವನಕ್ಕೆ ಕೊಳವೆ ಬಾವಿ ಹಾಗೂ ಸ್ಪ್ರಿಂಕಲ್ಸ್ ಕೆಲಸಗಳನ್ನು ತುಂಡು ಗುತ್ತಿಗೆ ಆಧಾರದ ಮೆ॥ಮಾತಾ ಬೋರ್‌ವೆಲ್ ಡ್ರಿಲ್ಲರ್ಸ್, ಬೆಂಗಳೂರು ರವರಿಂದ ನಿರ್ವಹಿಸಲು ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:31/05/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:31/05/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

**ವಿಷಯದ ಸಂಖ್ಯೆ:369/2008-09**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ಕೌದೇನಹಳ್ಳಿ ಕೆರೆಯ ಅಭಿವೃದ್ಧಿ ಕಾಮಗಾರಿ ಬಗ್ಗೆ.

**ಪ್ರಸ್ತಾವನೆ:**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ಕೌದೇನಹಳ್ಳಿ ಕೆರೆಯ ಹಂತ-1 ರ ಅಭಿವೃದ್ಧಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರ ಆದೇಶದ ಮೇರೆಗೆ ದರಪಟ್ಟಿ 2007-08 ರಂತೆ ಅಂದಾಜು ಪಟ್ಟಿಯನ್ನ ರೂ.97.80 ಲಕ್ಷಗಳಿಗೆ ತಯಾರಿಸಿದ್ದು, ಮುಖ್ಯ ಅಭಿಯಂತರರು (ಯೋಜನೆ-2) ರವರು ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಂಡಿಸಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಅಂದಾಜು ಪಟ್ಟಿ ರೂ.97.80 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:23/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:23/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:370/2008-09**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು ಬೊಮ್ಮನಹಳ್ಳಿ ವಲಯದ ಪುಟ್ಟೇನಹಳ್ಳಿ ಕೆರೆಯ ಅಭಿವೃದ್ಧಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಪ್ರಸ್ತಾವನೆ:**

ಪ್ರಸಕ್ತ ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು ಬೊಮ್ಮನಹಳ್ಳಿ ವಲಯದ ಪುಟ್ಟೇನ ಹಳ್ಳಿ ಕೆರೆಯ ಹಂತ-1 ರ ಅಭಿವೃದ್ಧಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರ ಆದೇಶದ ಮೇರೆಗೆ ದರಪಟ್ಟಿ 2007-08 ರಂತೆ ಅಂದಾಜು ಪಟ್ಟಿಯನ್ನು ರೂ.89,45 ಲಕ್ಷಗಳಿಗೆ ತಯಾರಿಸಿದ್ದು, ಮುಖ್ಯ ಅಭಿಯಂತರರು (ಯೋಜನೆ-2) ರವರು ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಂಡಿಸಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿ ಅಂದಾಜು ಪಟ್ಟಿ ರೂ.89.45 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:23/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:23/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:372/2008-09**

ಶ್ರೀ ಶಾರದಾ ಮಾತಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ದತ್ತಿ (ರಿ) ರವರಿಗೆ ಅನುದಾನ/ಸಹಾಯಧನ ಮಂಜೂರು ಮಾಡುವ ಬಗ್ಗೆ.

**ಪ್ರಸ್ತಾವನೆ:**

ಶ್ರೀ ಶಾರದಾ ಮಾತಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ದತ್ತಿ (ರಿ), ನಂ.1, 4ನೇ ಅಡ್ಡರಸ್ತೆ, ರಾಮಕ್ಕ ಬ್ಲಾಕ್, ಮುದ್ದಮ್ಮ ಗಾರ್ಡನ್ ಬಡಾವಣೆ, ಬೆನ್‌ಸನ್ ಟೌನ್ ಅಂಚೆ, ಬೆಂಗಳೂರು-46 ರವರು ಮನವಿ ಸಲ್ಲಿಸಿ, ತಮ್ಮ ಸಂಸ್ಥೆಯು ಕಳೆದ ಹಲವು ವರ್ಷಗಳಿಂದ ಅಂಗವಿಕಲ ಬುದ್ಧಿಮಾಂದ್ಯ ಮಕ್ಕಳ ಶಾಲೆಯನ್ನು ನಡೆಸುತ್ತಿದ್ದು, ಇದು ಸರ್ಕಾರದ ಯಾವುದೇ ಅನುದಾನವನ್ನು ಪಡೆಯದೇ ಕೇವಲ ಸಾರ್ವಜನಿಕರ ದನ ಸಹಾಯದಿಂದ ಮಾತ್ರ ನಡೆಯುತ್ತಿದ್ದು, ನಗರಪಾಲಿಕೆ ವತಿಯಿಂದ 2006-07 ನೇ ಸಾಲಿನಲ್ಲಿ ರೂ.25,000=00 ಗಳ ಸಹಾಯಧನವನ್ನು ಮಂಜೂರು ಮಾಡಿರುವುದಾಗಿ ತಿಳಿಸಿ, 2008-09ನೇ ಸಾಲಿಗೆ ಪಾಲಿಕೆ ವತಿಯಿಂದ ಅನುದಾನವನ್ನು ಮಂಜೂರು ಮಾಡಲು ಕೋರಿರುತ್ತಾರೆ.

ತತ್ಸಂಬಂಧವಾಗಿ, ಮೇಲಿನ ಅಂಶಗಳನ್ನು ಮಾನ್ಯ ಆಡಳಿತಗಾರರವರ ಗಮನಕ್ಕೆ ತರುತ್ತಾ ಪ್ರಸ್ತಾಪಿತ ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, 2008-09 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:24, ಸಂಸ್ಕೃತಿ ಮತ್ತು ಕ್ರೀಡೆ, ಕೊಡುಗೆ ಮತ್ತು ಸಹಾಯಾನುದಾನದಡಿ ಮೀಸಲಿರಿಸಿರುವ ರೂ.300.00 ಲಕ್ಷಗಳ ಅನುದಾನದಲ್ಲಿ ಪ್ರಸ್ತಾಪಿತ ಸಂಸ್ಥೆಗೆ 2008-09ನೇ ಸಾಲಿಗೆ ರೂ.25,000/- ಗಳ ಅನುದಾನವನ್ನು ಮಂಜೂರು ಮಾಡುವ ಸಂಬಂಧ ಸೂಕ್ತ ನಿರ್ಣಯಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು)

# ರು ಮಹಾನಗರ ಪಾಲಿಕೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ
ರ ದಿನಾಂಕ:30/07/2008 ರ ನಡವಳಿಗಳು

ಟೆರೀಯರ್ಸ್ ರವರಿಗೆ ಅನುದಾನ/ಸಹಾಯಧನ ಮಂಜೂರು

ಂಗಳೂರು ಟೆರಿಯರ್ಸ್, ನಂ.42, 5ನೇ ಮುಖ್ಯರಸ್ತೆ, 9ನೇ
ರವರು ಮನವಿ ಸಲ್ಲಿಸಿ, ಬೆಂಗಳೂರು ಟೆರೀಯರ್ಸ್‌ಗಳ
ಗಳೂರು ಮತ್ತು ಸುತ್ತಮುತ್ತಲು ವಾಸವಾಗಿರುವ ಕಡಿಮೆ
. ತಮ್ಮದು ಸ್ವಯಂ ಗಡಿ ರಕ್ಷಕದಳವಾಗಿದ್ದು, ಭಾಗಶ:
, ಇವರೆಲ್ಲಾ ಸಾಮಾನ್ಯ ನಾಗರೀಕರು, ರಾಷ್ಟ್ರದ ರಕ್ಷಣೆಯ
ರಿಟೆರಿಯಲ್ ಆರ್ಮಿಯು ಈ ಯುವಕರಿಗೆ ಅವರುಗಳ
ಡೆಯಲು ವಿಶಿಷ್ಟವಾದ ಅವಕಾಶ ಒದಗಿಸಿ ಈ ಮೂಲಕ
ತೆಗೆ ಸೇವೆ ಸಲ್ಲಿಸಲು ಅನುಕೂಲವಾಗುವಂತೆ ಮಾಡುತ್ತಾರೆ.
ರು ಕಲ್ಯಾಣ ಕಾರ್ಯಗಳಿಗಾಗಿ ಇಟ್ಟಿರುವ "ಬೆಂಗಳೂರು
08-09ನೇ ಸಾಲಿಗೆ ರೂ.3.00 ಲಕ್ಷಗಳ ಅನುದಾನವನ್ನು

ಮಾನ್ಯ ಆಡಳಿತಗಾರರವರ ಗಮನಕ್ಕೆ ತರುತ್ತಾ ಪ್ರಸ್ತಾಪಿತ
ವ ನಿಟ್ಟಿನಲ್ಲಿ, 2008-09 ನೇ ಸಾಲಿನ ಆಯವ್ಯಯದ ಲೆಕ್ಕ
ತ್ತು ಸಹಾಯಾನುದಾನದಡಿ ಮೀಸಲಿರಿಸಿರುವ ರೂ.300.00
ನಲ್ಲಿ ಮಂಜೂರು ಮಾಡಿದ್ದಂತೆ ರೂ.2.00 ಲಕ್ಷಗಳ
ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ
8 ರ ಟಿಪ್ಪಣಿ.

08 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು)

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ರ ನಡವಳಿಗಳು

ವಿಷಯದ ಸಂಖ್ಯೆ:374/2008-09

Asphalting to Ring Road from Mysore road junction to Silk Board junction via J.P.Nagar, BTM Layout Ch.7.40 Km to 9.80 Km Left Side Carriageway (Northern Side) ರ ಕಾಮಗಾರಿ ಬಗ್ಗೆ.

ಪ್ರಸ್ತಾವನೆ:

Asphalting to Ring Road from Mysore road junction to Silk Board junction via J.P.Nagar, BTM Layout Ch.7.40 Km to 9.80 Km Left Side Carriageway (Northern Side) ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಯೋಜನೆ-ಕೇಂದ್ರ-2) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಯೋಜನೆ-ಕೇಂದ್ರ-2) ರವರು ಕನಿಷ್ಟ ಟೆಂಡರ್‌ದಾರರಾದ ಶ್ರೀ.ಎಸ್.ಕೆ.ಮೂರ್ತಿ, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.98.50 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರಪಟ್ಟಿಯ ಆಧಾರದ ಮೇಲೆ ಕಾರ್ಯಪಾಲಕ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀರಿಕ್ಷಿಸಿ ಟೆಂಡರ್ ಕರೆದಿರುತ್ತಾರೆ. ಸದರಿ ಕಾಮಗಾರಿಯ ಟೆಂಡರ್‌ಗಿಟ್ಟ ಮೊಬಲಗು ರೂ.98,10,623.63 ಗಳಾಗಿದ್ದು, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಎಸ್.ಕೆ.ಮೂರ್ತಿ ರವರು ಶೇಕಡ 39.68% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಟ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಯೋಜನೆ-ಕೇಂದ್ರ-2) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ, ಗುತ್ತಿಗೆದಾರರು ಸಂಧಾನದ ನಂತರ ನಮೂದಿಸಿದ ಶೇಕಡ 30.75% ರಷ್ಟು ಹೆಚ್ಚುವರಿ ದರಗಳು ಸಮಪರ್ಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಬಿಟುಮಿನ್ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.47% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ದನಿರುತ್ತೇನೆಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಯೋಜನೆ) ರವರು ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತ (ಟೆಂಡರ್ ಪ್ರೀಮಿಯಂ ಸೇರಿ) ರೂ.1,28,27,007.56 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಯುಡಿಡಿ/116/ಎಹೆಚ್‌ಡಿ/2002, ದಿನಾಂಕ:24/01/2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ, ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು, ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು/ಆಡಳಿತಗಾರ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಎಸ್.ಕೆ.ಮೂರ್ತಿ ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಬಿಟುಮಿನ್ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.47% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,28,27,007.56 (ರೂ. ಒಂದು ಕೋಟಿ ಇಪ್ಪತ್ತೆಂಟು ಲಕ್ಷದ ಇಪ್ಪತ್ತೇಳು ಸಾವಿರದ ಏಳು ಮತ್ತು ಪೈಸೆ ಐವತ್ತಾರು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ರ ನಡವಳಿಗಳು

**ವಿಷಯದ ಸಂಖ್ಯೆ:375/2008-09**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ಚಿನ್ನಪ್ಪನಹಳ್ಳಿ ಕೆರೆಯ ಅಭಿವೃದ್ಧಿ ಕಾಮಗಾರಿ ಬಗ್ಗೆ.

**ಪ್ರಸ್ತಾವನೆ:**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ಚಿನ್ನಪ್ಪನಹಳ್ಳಿ ಕೆರೆಯ ಹಂತ-1 ರ ಅಭಿವೃದ್ಧಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರ ಆದೇಶದ ಮೇರೆಗೆ, ಅಂದಾಜು ಪಟ್ಟಿಯನ್ನು (ದರಪಟ್ಟಿ 2007-08 ರಂತೆ) ರೂ.82.60 ಲಕ್ಷಗಳಿಗೆ ತಯಾರಿಸಿದ್ದು, ಮುಖ್ಯ ಅಭಿಯಂತರರು (ಯೋಜನೆ-2) ರವರು ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಂಡಿಸಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಅಂದಾಜು ಪಟ್ಟಿ ರೂ.82.60 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

**ವಿಷಯದ ಸಂಖ್ಯೆ:376/2008-09**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿಯ ದೊರೆ ಕೆರೆಯ ಅಭಿವೃದ್ಧಿ ಕಾಮಗಾರಿ ಬಗ್ಗೆ.

**ಪ್ರಸ್ತಾವನೆ:**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿಯ ದೊರೆ ಕೆರೆಯ ಹಂತ-1 ರ ಅಭಿವೃದ್ಧಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರ ಆದೇಶದ ಮೇರೆಗೆ, ಅಂದಾಜು ಪಟ್ಟಿಯನ್ನು (ದರಪಟ್ಟಿ 2007-08 ರಂತೆ) ರೂ.97.50 ಲಕ್ಷಗಳಿಗೆ ತಯಾರಿಸಿದ್ದು, ಮುಖ್ಯ ಅಭಿಯಂತರರು (ಯೋಜನೆ-2) ರವರು ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಂಡಿಸಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಅಂದಾಜು ಪಟ್ಟಿ ರೂ. ರೂ.97.50 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:30/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:377/2008-09**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯದ ಮಾಳಗಾಳ (ಬಾಳಯ್ಯನ) ಕೆರೆಯ ಅಭಿವೃದ್ಧಿ ಕಾಮಗಾರಿ ಬಗ್ಗೆ.

**ಪ್ರಸ್ತಾವನೆ:**

ಜೆ.ಎನ್.ಎನ್.ಯು.ಆರ್.ಎಂ. ಸಹಯೋಗದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯದ ಮಾಳಗಾಳ (ಬಾಳಯ್ಯನ) ಕೆರೆಯ ಹಂತ-1 ರ ಅಭಿವೃದ್ಧಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರ ಆದೇಶದ ಮೇರೆಗೆ, ಅಂದಾಜು ಪಟ್ಟಿಯನ್ನು (ದರಪಟ್ಟಿ 2007-08) ರಂತೆ ರೂ.93.50 ಲಕ್ಷಗಳಿಗೆ ತಯಾರಿಸಿದ್ದು, ಮುಖ್ಯ ಅಭಿಯಂತರರು (ಯೋಜನೆ-2) ರವರು ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಂಡಿಸಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಅಂದಾಜು ಪಟ್ಟಿ ರೂ. ರೂ.93.50 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:24/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು